All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

11.03.2025 2.30P.M.

**<><><><>**

ಮುಖ್ಯಾಂಶಗಳು

- ಕಟ್ಟಡ ಕಾರ್ಮಿಕರಿಗಾಗಿ ೧೩೫ ಸಂಚಾರಿ ಅಂಬ್ಯುಲೆನ್ಸ್ ಲೋಕಾರ್ಪಣೆಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
- ಖಾತರಿ ಯೋಜನೆಗಳ ಅನುಷ್ಠಾನ ಸಮಿತಿಗೆ ಕಾಂಗ್ರೆಸ್ ಕಾರ್ಯಕರ್ತರ ನೇಮಕ ವಿರೋಧಿಸಿ ವಿಧಾನಸಭೆಯಲ್ಲಿ ಪ್ರತಿಪಕ್ಷಗಳಿಂದ ಧರಣಿ
- ಅಕ್ರಮ ಮರಳು ಗಣಿಗಾರಿಕೆ - ಕಳೆದ ೫ ವರ್ಷಗಳಲ್ಲಿ ೪೭ ಕೋಟಿ ರೂಪಾಯಿ ದಂಡ ಸಂಗ್ರಹ
- ಕೆಂಪು ಮೆಣಸಿನಕಾಯಿಗೆ ಕೇಂದ್ರದ ಬೆಲೆ ಕೊರತೆ ಪಾವತಿ ಯೋಜನೆ ರಾಜ್ಯಕ್ಕೂ ವಿಸ್ತರಿಸುವಂತೆ ಮುಖ್ಯಮಂತ್ರಿ ಪತ್ರ
- ಕೇಂದ್ರ ಸರ್ಕಾರದ ಪ್ರಸಾದ್ ಯೋಜನೆ ಅಡಿ ಬೆಳಗಾವಿ ಜಿಲ್ಲೆಯ ಸವದತ್ತಿ ಯಲ್ಲಮ್ಮ ದೇವಾಲಯ ಆಯ್ಕೆ

<><><><>

ಬಸವಣ್ಣನವರ ಕಾಯಕ-ದಾಸೋಹ ಪರಿಕಲ್ಪನೆಯಲ್ಲಿ ರಾಜ್ಯ ಸರ್ಕಾರ ಕಾರ್ಯಕ್ರಮಗಳನ್ನು ರೂಪಿಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಕಾರ್ಮಿಕ ಇಲಾಖೆ ವತಿಯಿಂದ ಕಟ್ಟಡ ಕಾರ್ಮಿಕರಿಗಾಗಿ ಸಜ್ಜುಗೊಳಿಸಿರುವ ೧೩೫ ಸಂಚಾರಿ ಆರೋಗ್ಯ ಘಟಕ ಆಂಬುಲೆನ್ಸ್ ವಾಹನಗಳನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು. ಇಡೀ ದೇಶ ಕಾರ್ಮಿಕರ ಶ್ರಮವನ್ನು ಅವಲಂಬಿಸಿದೆ. ಸಮಾಜದಲ್ಲಿ ಒಂದೇ ವರ್ಗದವರು ದುಡಿಯುತ್ತಿರಬಾರದು, ಎಲ್ಲಾ ವರ್ಗದವರೂ ದುಡಿಯಬೇಕು. ಆಗ ಮಾತ್ರ ಬುದ್ಧ, ಬಸವ, ಅಂಬೇಡ್ಕರ್ ಆಶಯದ ಸಮ ಸಮಾಜ ನಿರ್ಮಾಣ ಸಾಧ್ಯ ಎಂದರು.

**ಧ್ವನಿ : ಸಿದ್ದರಾಮಯ್ಯ ಮುಖ್ಯಮಂತ್ರಿ (೨೪ ಸೆಕೆಂಡ್‌ಗಳು)**

ಕಟ್ಟಡ ಮತ್ತು ಇತರೆ ಕಾರ್ಮಿಕರ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎನ್ನುವ ಕಾರಣದಿಂದ ರಾಜ್ಯ ಸರ್ಕಾರ ಕಾರ್ಮಿಕರ ಮಕ್ಕಳಿಗಾಗಿ ಉಚಿತ ಊಟ ಒಳಗೊಂಡ ವಸತಿ ಶಾಲೆಗಳನ್ನು ತೆರೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇದೇ ವೇಳೆ ಘೋಷಿಸಿದರು.

<><><><>

ಸರ್ಕಾರದ ಖಾತರಿ ಯೋಜನೆಗಳ ಅನುಷ್ಠಾನಕ್ಕೆ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಸಮಿತಿಗಳನ್ನು ರಚನೆ ಮಾಡಿ, ಅವುಗಳಿಗೆ ಕಾಂಗ್ರೆಸ್ ಕಾರ್ಯಕರ್ತರನ್ನು ಅಧ್ಯಕ್ಷ, ಉಪಾಧ್ಯಕ್ಷರನ್ನಾಗಿ ನೇಮಿಸಿ, ವೇತನ ನೀಡುತ್ತಿರುವುದಕ್ಕೆ ವಿಧಾನಸಭೆಯಲ್ಲಿ ಇಂದು ತೀವ್ರ ವಿರೋಧ ವ್ಯಕ್ತವಾಯಿತು. ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಧರಣಿ ನಡೆಸಿದ್ದರಿಂದ ಸದನದಲ್ಲಿ ಗದ್ದಲದ ವಾತಾವರಣ ಉಂಟಾಗಿತ್ತು. ಜನಸಾಮಾನ್ಯರ ತೆರಿಗೆ ಹಣವನ್ನು ಕಾಂಗ್ರೆಸ್ ಕಾರ್ಯಕರ್ತರಿಗೆ ನೀಡುತ್ತಿರುವುದು ಸಂವಿಧಾನಬಾಹಿರವಾಗಿದೆ. ಶಾಸಕರ ಅಧಿಕಾರ ಮೊಟಕುಗೊಳಿಸಿ, ಕಾಂಗ್ರೆಸ್ ಕಾರ್ಯಕರ್ತರಿಗೆ ಖಾತರಿ ಯೋಜನೆಗಳ ಅನುಷ್ಠಾನ ಉಸ್ತುವಾರಿ ನೀಡಿರುವುದು ಸರಿಯಲ್ಲ ಎಂದು ಪ್ರತಿಪಕ್ಷಗಳ ಸದಸ್ಯರು ಆಕ್ಷೇಪಿಸಿದರು. ಧರಣಿ, ಗದ್ದಲದ ನಡುವೆಯೇ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಪ್ರಶ್ನೋತ್ತರ ಕಲಾಪ ಮುಂದುವರೆಸಿದರು. ಬಳಿಕ ಸಭಾಧ್ಯಕ್ಷರು, ಶಾಸನ ಮಂಡನೆ ಕಲಾಪಕ್ಕೆ ಅನುವು ಮಾಡಿದಾಗ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯಕ್ಕೆ ಮಹಾತ್ಮಾ ಗಾಂಧಿ ಅವರ ಹೆಸರು ಇಡುವ ಸಂಬಂಧದ ತಿದ್ದುಪಡಿ ವಿಧೇಯಕ ಮಂಡಿಸಿದರು. ಬಳಿಕ ಸಭಾಧ್ಯಕ್ಷರು ಕಲಾಪವನ್ನು ಮಧ್ಯಾಹ್ನ ಮೂರು ಗಂಟೆಗೆ ಮುಂದೂಡಿದರು.

<><><><>

ಅನಧಿಕೃತ ಮರಳು ಸಾಗಾಟ ತಡೆಯಲು ಜಿಲ್ಲಾ ಮಟ್ಟದಲ್ಲಿ ರಚಿಸಲಾಗಿರುವ ಕಾರ್ಯಪಡೆ ಮರಳು ಸಮಿತಿಗೆ ಹೆಚ್ಚು ಒತ್ತು ನೀಡಲಾಗುತ್ತಿದೆ. ಅಕ್ರಮ ಮರಳು ಸಾಗಾಟ ಪ್ರಕರಣಗಳಿಗೆ ಸಂಬಂಧಿಸಿದಂತೆ ಕಳೆದ ಐದು ವರ್ಷಗಳಲ್ಲಿ ೪೭ ಕೋಟಿ ರೂಪಾಯಿ ದಂಡ ವಸೂಲಿ ಮಾಡಲಾಗಿದೆ ಎಂದು ಗಣಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ವಿಧಾನಪರಿಷತ್‌ನಲ್ಲಿಂದು ತಿಳಿಸಿದ್ದಾರೆ. ವಿಧಾನಪರಿಷತ್‌ನ ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿ ಸದಸ್ಯ ಡಾ.ಧನಂಜಯ ಸರ್ಜಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಅಕ್ರಮ ಮರಳು ಸಾಗಾಟ ಮಾಡಿದವರ ವಿರುದ್ಧ ೨೩ ಸಾವಿರದ ೫೭೨ ಪ್ರಕರಣಗಳನ್ನು ಪತ್ತೆ ಹಚ್ಚಿ, ೭ ಸಾವಿರದ ೬೨೯ ಎಫ್‌ಐಆರ್ ದಾಖಲಿಸಲಾಗಿದೆ. ಕಾನೂನುಬಾಹಿರವಾಗಿ ಮರಳು ಗಣಿಗಾರಿಕೆಯಲ್ಲಿ ತೊಡಗಿದ್ದವರಿಂದ ೪೭ ಕೋಟಿ ರೂಪಾಯಿ ದಂಡ ಸಂಗ್ರಹಿಸಲಾಗಿದೆ ಎಂದು ಮಾಹಿತಿ ನೀಡಿದರು. ರಾಜ್ಯದಲ್ಲಿ ಒಟ್ಟು ೨೬೦ ಮರಳು ಬ್ಲಾಕ್‌ಗಳು ಹಾಗೂ ೮೭೯ ಎಂ-ಸ್ಯಾಂಡ್ ಬ್ಲಾಕ್‌ಗಳಿವೆ. ೨೦೨೩-೨೪ನೇ ಸಾಲಿನಲ್ಲಿ ೨೪ ಲಕ್ಷ ೧೦ ಸಾವಿರದ ೨೩೬ ಮೆಟ್ರಿಕ್ ಟನ್ ಮರಳಿನಿಂದ ೩೫ ಕೋಟಿ ೬೮ ಲಕ್ಷ ರೂಪಾಯಿ ರಾಜಧನ ಸಂಗ್ರಹಿಸಲಾಗಿದೆ ಎಂದು ತಿಳಿಸಿದರು.

<><><><>

ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ - ನಬಾರ್ಡ್ ಈ ಬಾರಿ ೩ ಸಾವಿರದ ೨೩೬ ಕೋಟಿ ರೂಪಾಯಿ ಮಂಜೂರು ಮಾಡಿದೆ. ಹಿಂದಿನ ವರ್ಷಕ್ಕೆ ಹೋಲಿಸಿದರೆ, ಈ ಬಾರಿ ಕಡಿಮೆ

ಹಣ ಮಂಜೂರಾಗಿದೆ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ವಿಧಾನಪರಿಷತ್‌ನಲ್ಲಿಂದು ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ಸದಸ್ಯ ದಿನೇಶ್ ಗೂಳಿಗೌಡ ಕೇಳಿದ ಪ್ರಶ್ನೆಗೆ ಉತ್ತರಿಸಿದ  ಸಚಿವರು, ೨೦೨೩-೨೪ರಲ್ಲಿ ೫ ಸಾವಿರದ ೬೦೦ ಸಾವಿರ ಕೋಟಿ ರೂಪಾಯಿ ಮಂಜೂರಾಗಿತ್ತು. ೨೦೨೪-೨೫ರಲ್ಲಿ ೨ ಸಾವಿರದ ೩೪೦ ಸಾವಿರ ಕೋಟಿ ರೂಪಾಯಿ ಅನುದಾನ ಬಿಡುಗಡೆಯಾಗಿತ್ತು. ಈ ಸಂಬಂಧ ರಾಜ್ಯ ಸರ್ಕಾರ ಪತ್ರ ಬರೆದು ಮನವಿ ಮಾಡಿದಾಗ ಹೆಚ್ಚುವರಿಯಾಗಿ ೮೯೬ ಕೋಟಿ ಬಿಡುಗಡೆ ಮಾಡಿದೆ. ಹಿಂದಿನ ವರ್ಷಗಳಲ್ಲಿ ಹೋಲಿಸಿದರೆ  ಇದು ಕಡಿಮೆಯಾಗಿದ್ದು, ಇನ್ನಷ್ಟು ಹಣ ಬಿಡುಗಡೆ ಮಾಡುವಂತೆ ಪತ್ರ ಬರೆಯಲಾಗುವುದು ಎಂದು ತಿಳಿಸಿದರು.

<><><>

ರಾಜ್ಯದ ಎಲ್ಲಾ ಮಹಾನಗರ ವ್ಯಾಪ್ತಿಯ ಜಲಮಂಡಳಿಗಳಲ್ಲಿ ೧೩ ಸಾವಿರ ಮಂದಿ ನೀರು ಸರಬರಾಜು ಗುತ್ತಿಗೆ ನೌಕರರು ಇದ್ದು, ಇವರನ್ನು ಸರ್ಕಾರಿ ನೌಕರರನ್ನಾಗಿ ಮಾಡಲು ಕಾನೂನಿನಲ್ಲಿ ಅವಕಾಶವಿಲ್ಲ ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ವಿಧಾನಪರಿಷತ್‌ನಲ್ಲಿಂದು ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿ ಸದಸ್ಯ ಡಿ.ಎಸ್.ಅರುಣ್ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಹೊರಗುತ್ತಿಗೆ ಆಧಾರದ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ನೀರು ಸರಬರಾಜು ನೌಕರರಿಗೆ ಕಾರ್ಮಿಕ ಇಲಾಖೆ ನಿಗದಿಪಡಿಸಿದ ಕನಿಷ್ಠ ವೇತನ ನೀಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

<><><>

ಕೆಂಪು ಮೆಣಸಿನಕಾಯಿಗೆ ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆ-ಎಂಐಎಸ್ ಅಡಿಯಲ್ಲಿ ಬೆಲೆ ಕೊರತೆ ಪಾವತಿ-ಪಿಡಿಪಿ ಯೋಜನೆಯನ್ನು ಕರ್ನಾಟಕಕ್ಕೂ ಕೂಡಲೇ ವಿಸ್ತರಿಸಬೇಕೆಂದು ಒತ್ತಾಯಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್ ಅವರಿಗೆ ಪತ್ರ ಬರೆದಿದ್ದಾರೆ. ಈ ಕ್ರಮದಿಂದ ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ರೈತರಿಗೆ ಪ್ರಯೋಜನವಾಗಲಿದೆ.

<><><>

ತೀರ್ಥಕ್ಷೇತ್ರ ಪುನರುಜ್ಜೀವನ ಮತ್ತು ಆಧ್ಯಾತ್ಮಿಕ ಪರಂಪರೆ ಅಭಿವೃದ್ಧಿ ಅಭಿಯಾನ- ಪ್ರಸಾದ್ ಯೋಜನೆಯಡಿ ಕೇಂದ್ರ ಸರ್ಕಾರ, ಬೆಳಗಾವಿ ಜಿಲ್ಲೆಯ ಸವದತ್ತಿ ಯಲ್ಲಮ್ಮ ದೇವಾಲಯವನ್ನು ಆಯ್ಕೆ ಮಾಡಿದೆ. ಇದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರಿಗೆ ಸಂಸದ ಬಸವರಾಜ ಬೊಮ್ಮಾಯಿ ಧನ್ಯವಾದ ತಿಳಿಸಿದ್ದಾರೆ. ೧೮ ಕೋಟಿ ೩೬ ಲಕ್ಷ ರೂಪಾಯಿ ವೆಚ್ಚದಲ್ಲಿ ಸವದತ್ತಿ ಯಲ್ಲಮ್ಮ ಕ್ಷೇತ್ರವನ್ನು ಅಭಿವೃದ್ಧಿಪಡಿಸಲಾಗುವುದು. ತೀರ್ಥಯಾತ್ರಿಗಳ ಆಗಮನ ಕೇಂದ್ರ, ಉಪಹಾರ ಕೇಂದ್ರ, ಪ್ರಥಮ ಚಿಕಿತ್ಸಾ ಕೇಂದ್ರ ಸೇರಿದಂತೆ ಅತ್ಯಾಧುನಿಕ ಸೌಲಭ್ಯಗಳನ್ನು

ಕಲ್ಪಿಸಲಾಗುವುದು. ಮೂಲಸೌಕರ್ಯ ಅಭಿವೃದ್ಧಿಯಿಂದಾಗಿ ಕ್ಷೇತ್ರಕ್ಕೆ ಬರುವ ಭಕ್ತರ ಸಂಖ್ಯೆ ಕೂಡ ಹೆಚ್ಚಳವಾಗಲಿದೆ ಎಂದು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

<><><><>

ಈ ಬಾರಿಯ ಐಪಿಎಲ್ ಪಂದ್ಯಾವಳಿ ಸಂದರ್ಭದಲ್ಲಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿಯು ಸಂಸ್ಕರಿಸಿದ ನೀರನ್ನು ಸರಬರಾಜು ಮಾಡಲಿದೆ ಎಂದು ಮಂಡಳಿ ಅಧ್ಯಕ್ಷ ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಏಷ್ಯಾದಲ್ಲೇ ಅತಿ ಹೆಚ್ಚು ಸಂಸ್ಕರಿಸಿದ ನೀರಿನ ಮರುಬಳಕೆಯಲ್ಲಿ ಬೆಂಗಳೂರು ನಗರ ಖ್ಯಾತಿ ಪಡೆದಿದೆ. ಸಂಸ್ಕರಿಸಿದ ನೀರಿನ ಮರುಬಳಕೆಯ ಬಗ್ಗೆ ಇನ್ನಷ್ಟು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಈ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು. ಕಳೆದ ಬಾರಿ ಬೆಂಗಳೂರು ನಗರದಲ್ಲಿ ನೀರಿನ ಸಮಸ್ಯೆ ತೀವ್ರವಾದಾಗ ಸಂಸ್ಕರಿಸಿದ ನೀರಿನ ಬಳಕೆಗೆ ಉತ್ತೇಜನ ನೀಡಲಾಗಿತ್ತು. ಈ ಬಾರಿಯೂ ಭಾರತೀಯ ವಿಜ್ಞಾನ ಸಂಸ್ಥೆಯ ವಿಜ್ಞಾನಿಗಳು, ಅಂತರ್ಜಲ ಕುಸಿತದಿಂದ ನೀರಿನ ಕೊರತೆ ಉಂಟಾಗಲಿರುವ ಬಗ್ಗೆ ಮುನ್ಸೂಚನೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಬೆಂಗಳೂರು ಜಲಮಂಡಳಿ ಸಂಸ್ಕರಿಸಿದ ನೀರಿನ ಮರುಬಳಕೆಯ ಬಗ್ಗೆ ಸಾಕಷ್ಟು ಜಾಗೃತಿಯನ್ನು ಮೂಡಿಸಲು ಮುಂದಾಗಿದೆ. ಕುಡಿಯಲು ಹಾಗೂ ಅಡುಗೆಗೆ ಹೊರತುಪಡಿಸಿ, ದಿನನಿತ್ಯದ ಚಟುವಟಿಕೆಗಳಿಗೆ ಸಂಸ್ಕರಿಸಿದ ನೀರನ್ನು ಬಳಸಬಹುದಾಗಿದೆ ಎಂದು ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದರು.

<><><><>

ಯುಗಾದಿ ಉತ್ಸವಕ್ಕಾಗಿ ಆಂಧ್ರಪ್ರದೇಶದ ಶ್ರೀಶೈಲ ದೇವಸ್ಥಾನ ಸಜ್ಜುಗೊಳ್ಳುತ್ತಿದೆ. ಯುಗಾದಿಯ ಉತ್ಸವ ದಿನಗಳಾದ ಮಾರ್ಚ್ ೨೭ ರಿಂದ ೩೧ರವರೆಗೆ ಶ್ರೀ ಮಲ್ಲಕಾರ್ಜುನ ಸ್ವಾಮಿಯ ಸ್ಪರ್ಶ ದರ್ಶನಕ್ಕೆ ಅವಕಾಶವಿಲ್ಲ. ಹಾಗಾಗಿ ಯುಗಾದಿ ಉತ್ಸವಗಳು ಪ್ರಾರಂಭವಾಗುವ ಹತ್ತು ದಿನಗಳ ಮೊದಲು ಅಂದರೆ ಮಾರ್ಚ್ ೧೭ ರಿಂದ ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳಾದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಕ್ಷೇತ್ರಕ್ಕೆ ಆಗಮಿಸುತ್ತಾರೆ. ಭಕ್ತರಿಗೆ ಮಾರ್ಚ್ ೧೭ ರಿಂದ ೨೭ರವರೆಗೆ ನಿರ್ದಿಷ್ಟ ಸಮಯದಲ್ಲಿ ಸ್ಪರ್ಶದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ಯುಗಾದಿ ಉತ್ಸವಗಳಿಗಾಗಿ ಸುಮಾರು ೮ ಲಕ್ಷ ಭಕ್ತರು ಕ್ಷೇತ್ರಕ್ಕೆ ಆಗಮಿಸುವ ನಿರೀಕ್ಷೆಯಿದೆ. ಇದಕ್ಕಾಗಿ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಆಂಧ್ರಪ್ರದೇಶ ಸರ್ಕಾರದ ಧಾರ್ಮಿಕದತ್ತಿ ಇಲಾಖೆ ತಿಳಿಸಿದೆ. ಆನ್‌ಲೈನ್ ಬುಕ್ಕಿಂಗ್ ಮತ್ತು ನಿರ್ದಿಷ್ಟ ಸಮಯದಲ್ಲಿ ಕೌಂಟರ್‌ಗಳಲ್ಲಿ ಸ್ಪರ್ಶದರ್ಶನ ಟಿಕೆಟ್‌ಗಳು ಲಭ್ಯವಿರುತ್ತದೆ. ಟಿಕೆಟ್ ಶುಲ್ಕವಾಗಿ ೫೦೦ ರೂಪಾಯಿ ನಿಗದಿಪಡಿಸಲಾಗಿದೆ. ಪ್ರತಿ ಹಂತದಲ್ಲಿ ಒಂದು ಸಾವಿರದ ೫೦೦ ಟಿಕಟ್‌ಗಳು ಮಾತ್ರ ವಿತರಿಸಲಾಗುವುದು ಎಂದು ಶ್ರೀಶೈಲ ಮಹಾಕ್ಷೇತ್ರದ ಕಾರ್ಯನಿರ್ವಾಹಕ ಅಧಿಕಾರಿ ಎಂ. ಶ್ರೀನಿವಾಸರಾವ್ ತಿಳಿಸಿದ್ದಾರೆ.

<><><><>

ಮಡಿಕೇರಿ ಮತ್ತ ಕೇರಳ ರಾಜ್ಯದ ಗಡಿಯಲ್ಲಿರುವ ಪಣತೂರು ಮಾರ್ಗದಲ್ಲಿ ಬಾಕಿ ಉಳಿದಿರುವ ರಸ್ತೆ ನಿರ್ಮಾಣ ಪ್ರಕ್ರಿಯೆಯನ್ನು ತ್ವರಿತಗತಿಯಲ್ಲಿ ಆರಂಭಿಸುವಂತೆ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವ ನಿತಿನ್ ಗಡ್ಕರಿ ಅವರಿಗೆ ಮೈಸೂರು-ಕೊಡಗು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮನವಿ ಸಲ್ಲಿಸಿದ್ದಾರೆ. ರಸ್ತೆ ಕಾಮಗಾರಿ ವಿಳಂಬದಿಂದ ಈ ಪ್ರದೇಶದ ಜನರಿಗೆ ಅನಾನುಕೂಲ ಉಂಟಾಗಿದೆ. ಸ್ಥಳೀಯ ಮತ್ತು ಅಂತರ ರಾಜ್ಯ ಪ್ರಯಾಣಕ್ಕೆ ಈ ರಸ್ತೆಯ ಪ್ರಾಮುಖ್ಯತೆ ಗಮನದಲ್ಲಿಟ್ಟುಕೊಂಡು ನಿರ್ಮಾಣ ಪ್ರಕ್ರಿಯೆ ತ್ವರಿತವಾಗಿ ಆರಂಭಿಸಬೇಕು.

<><><><>

ಜನರಿಗೆ ತಮ್ಮ ಆಸ್ತಿ ಮಾಲೀಕತ್ವದ ದಾಖಲೆಗಳನ್ನು ಆನ್‌ಲೈನ್‌ನಲ್ಲಿ ನಿರ್ವಹಿಸಲು ಅನುಕೂಲವಾಗುವಂತೆ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಇ-ಖಾತಾ ಆಂದೋಲನ ರಾಜ್ಯಾದ್ಯಂತ ಯಶಸ್ವಿಯಾಗಿ ನಡೆಯುತ್ತಿದೆ ಎಂದು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಹೇಳಿದ್ದಾರೆ. ಇ-ಖಾತಾ ಅಭಿಯಾನದ ಅಂಗವಾಗಿ ದಾವಣಗೆರೆ ಉತ್ತರ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಅರ್ಹ ಫಲಾನುಭವಿಗಳಿಗೆ ಪ್ರಮಾಣ ಪತ್ರಗಳನ್ನು ಸಾಂಕೇತಿಕವಾಗಿ ವಿತರಣೆ ಮಾಡಿ ಅವರು ಮಾತನಾಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>